ಕರ್ನಾಟಕ ಸರ್ಕಾರ

**ಉರ್ದು ಮತ್ತು ಇತರೆ ಅಲ್ಪಸಂಖ್ಯಾ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು-01**

ಸಂಖ್ಯೆ: ವೃಶಿ.ವಿಭಾಗ.ರಾ.ಮ.ವೃ.ಶಿ.ಪ್ರ/01/18-19 ದಿನಾಂಕ: 1.01.2019.

**ಜ್ಞಾಪನ**

ವಿಷಯ: ರಾಜ್ಯಮಟ್ಟದ ಪ್ರೌಢಶಾಲಾ ಶೈಕ್ಷಣಿಕ ಹಾಗೂ ಮಕ್ಕಳ ವೃತ್ತಿ ಕಲಿಕೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವೃತ್ತಿ ಶಿಕ್ಷಣ ಕಲಿಕೊತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವೃತ್ತಿ ಶಿಕ್ಷಕರು ಮತ್ತು ವಿಷಯ ಪರಿವೀಕ್ಷಕರು ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: ಉಪನಿರ್ದೇಶಕರು(ಆಡಳಿತ), ದಾವಣಗೆರೆ ಇವರ ಪತ್ರ ಸಂಖ್ಯೆ: ವಿ.ಪ(ವೃ.ಶಿ):ರಾ.ಮ.ವೃ.ಶಿ.ಕ.ಕಾ:01/2018-19, ದಿನಾಂಕ: 1-01-2019.

@@@@@@@

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು ವತಿಯಿಂದ ರಾಜ್ಯಮಟ್ಟದ ಪ್ರೌಢಶಾಲಾ ಶೈಕ್ಷಣಿಕ ಹಾಗೂ ಮಕ್ಕಳ ವೃತ್ತಿ ಕಲಿಕೋತ್ಸವ ಕಾರ್ಯಕ್ರಮವನ್ನು **ಶ್ರೀಮದ್ ಅಭಿನವ ರೇಣುಕ ಮಂದಿರ ಟ್ರಸ್ಟ್ ಪಿ.ಬಿ.ರಸ್ತೆ, ದಾವಣಗೆರೆ(ಬಿಗ್ ಬಜಾರ್ ಹತ್ತಿರ)** ಇಲ್ಲಿ ದಿನಾಂಕ: **10-01-2019 ಹಾಗೂ 11-01-2019 ರಂದು** ಎರಡು ದಿನಗಳ ಕಾರ್ಯಕ್ರಮವನ್ನು ಉಲೇಖಿತ ಪತ್ರದನ್ವಯ ಉಪನಿರ್ದೇಶಕರು ಆಯೋಜನೆ ಮಾಡಿರುತ್ತಾರೆ. ಜಿಲ್ಲಾ ಮಟ್ಟದ ಪ್ರೌಢಶಾಲಾ ಶೈಕ್ಷಣಿಕ ಹಾಗೂ ಮಕ್ಕಳ ವೃತ್ತಿ ಶಿಕ್ಷಣ ಕಲಿಕೋತ್ಸವ ಕಾರ್ಯಕ್ರಮದಲ್ಲಿ ತೋಟಗಾರಿಕೆ, ಹೊಲಿಗೆ, ಕೃಷಿ ಮರಗೆಲಸ, ರೇಷ್ಮೆ ಮತ್ತು ಸಾಮಾಜಿಕ ಉಪಯುಕ್ತ ಉತ್ಪಾದನ ಕಾರ್ಯದ ವಿಷಯಗಳಲ್ಲಿ ಪ್ರಥಮ ಸ್ಥಾನ ಪಡೆದಿರುವ ಪ್ರೌಢ ಶಾಲಾ ವಿದ್ಯಾರ್ಥಿಗಳು ಹಾಗೂ ವೃತ್ತಿ ಶಿಕ್ಷಕರು ಬೆಳೆಸಿರುವ / ತಯಾರಿಸಿರುವ ವಸ್ತುಗಳೊಂದಿಗೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ತಿಳಿಸಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ವಿದ್ಯಾರ್ಥಿಗಳು ಮತ್ತು ವೃತ್ತಿ ಶಿಕ್ಷಕರು ದಿನಾಂಕ: 10-01-2019ರಂದು ಸಂಜೆ 5:00 ಘಂಟೆಯೊಳಗಾಗಿ ಮೇಲ್ಕಂಡ ಶಾಲೆಯಲ್ಲಿ ಹೆಸರು ನೊಂದಾಯಿಸಿಕೊಳ್ಳಲು ತಿಳಿಸಿದೆ.

ಅದೇ ರೀತಿ ರಾಜ್ಯದ 34 ಶೈಕ್ಷಣಿಕ ಜಿಲ್ಲೆಗಳ ಸರ್ಕಾರಿ ಪ್ರೌಢಶಾಲೆ ಮತ್ತು ಅನುದಾನಿತ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೃತ್ತಿ ಶಿಕ್ಷಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ವೀಕ್ಷಣೆ ಮಾಡಬಹುದಾಗಿದೆ. ಇದರಿಂದ ಕಂಡು ಬರುವ ಉತ್ತಮ ಅಂಶಗಳನ್ನು ಮುಂದಿನ ದಿನಗಳಲ್ಲಿ ಸಂಬಂಧಿಸಿದ ಶಾಲೆಗಳಲ್ಲಿ ಅಳವಡಿಸಿಕೊಳ್ಳಲು ಸಹಕಾರಿಯಾಗಿರುತ್ತದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಎಲ್ಲಾ ವೃತ್ತಿ ಶಿಕ್ಷಕರು ಮತ್ತು ವಿಷಯ ಪರಿವೀಕ್ಷಕರು (ವೃತ್ತಿ ಶಿಕ್ಷಣ)ರಿಗೆ ಎರಡು ದಿನಗಳು ಅನ್ಯ ಕಾರ್ಯನಿಮಿತ್ತ(ಓ.ಓ.ಡಿ) ಎಂಬುದಾಗಿ ಪರಿಗಣಿಸುವುದು. ವೀಕ್ಷಣೆಗೆ ಬರುವ ವೃತ್ತಿ ಶಿಕ್ಷಕರಿಗೆ ಬಂದು ಹೋಗುವ ಸಾಮಾನ್ಯ ಬಸ್ ಪ್ರಯಾಣ ದರವನ್ನು ಶಾಲಾ ಸಂಚಿತ ನಿಧಿಯಿಂದ ಭರಿಸಲು ಶಾಲಾ ಮುಖ್ಯಸ್ಥರಿಗೆ ತಿಳಿಸಿದೆ. ವೀಕ್ಷಣೆಗೆ ಬರುವ ವೃತ್ತಿ ಶಿಕ್ಷಕರು ದಿನಾಂಕ: 11-01-2019 ಬೆಳಗ್ಗೆ 9:00 ಘಂಟೆಗೆ ಮೇಲ್ಕಂಡ ಶಾಲೆಯಲ್ಲಿ ಹೆಸರು ನೊಂದಾಯಿಸಿಕೊಳ್ಳಲು ಸೂಚಿಸಿದ್ದು ಇದರ ಬಗ್ಗೆ ಕ್ರಮವಹಿಸಲು ಉಪನಿರ್ದೇಶಕರಿಗೆ ತಿಳಿಸಿದೆ. ಹಾಗೆಯೇ ವಿಷಯ ಪರೀವಿಕ್ಷಕರು (ವೃತ್ತಿ ಶಿಕ್ಷಣ) ಇವರು ದಿನಭತ್ಯೆ ಮತ್ತು ಪ್ರಯಾಣ ಭತ್ಯೆಯನ್ನು ತಮ್ಮ ಕಛೇರಿ ಹಂತದಲ್ಲಿ ಪಡೆಯುವುದು. ಹೆಚ್ಚಿನ ವಿವರಗಳಿಗಾಗಿ ದಾವಣಗೆರೆ ಜಿಲ್ಲೆಯ ವಿಷಯ ಪರೀವಿಕ್ಷಕರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ **ಎಲ್.ಟಿ.ಬೇಗಾರ್** ಇವರನ್ನು ಸಂಪರ್ಕಿಸುವುದು. **(ದೂರವಾಣಿ ಸಂಖ್ಯೆ: 9980640756)**

ನಿರ್ದೇಶಕರು(ಮೈನಾರಿಟಿ)

<u>ಪ್ರತಿಯನ್ನು:</u>

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ ಕಲಬುರ್ಗಿ
2. ನಿರ್ದೇಶಕರ ಆಪ್ತ ಶಾಖೆ, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು.

3. ವಿಭಾಗೀಯ ಸಹ ನಿರ್ದೇಶಕರು ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಧಾರವಾಡ/ಬೆಳಗಾವಿ
4. ರಾಜ್ಯ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸೂಕ್ತ ಕ್ರಮಕ್ಕಾಗಿ
5. ರಾಜ್ಯ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸೂಕ್ತ ಕ್ರಮಕ್ಕಾಗಿ
6. ಉಪನಿರ್ದೇಶಕರು(ಸಂಸ್ಕೃತ), ಆಯುಕ್ತರ ಕಛೇರಿ, ಬೆಂಗಳೂರು
7. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ಹಿರಿಯ ಸಹಾಯಕ ನಿರ್ದೇಶಕರು(ವೃತ್ತಿ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸೂಕ್ತ ಕ್ರಮಕ್ಕಾಗಿ
10. ವಿಷಯ ಪರಿವೀಕ್ಷಕರು (ವೃತ್ತಿ ಶಿಕ್ಷಣ), ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸೂಕ್ತ ಕ್ರಮಕ್ಕಾಗಿ